ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1682
ಸದಸ್ಯರ ಹೆಸರು	:	ಶ್ರೀ ಹೆಚ್. ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	14-03-2022
ಉತ್ತರಿಸುವ ಸಚಿವರು	:	ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

***

	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ರೈತರಿಗೆ ವಿದ್ಯುತ್ ಪರಿವರ್ತಕ ವಿತರಿಸಿ (ಟಿ.ಸಿ.) ಶೀಘ್ರ ಸಂಪರ್ಕ ನೀಡುವಲ್ಲಿ ಅಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜ್ಯದಲ್ಲಿನ ರೈತರ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕುರಿತು ಸರ್ಕಾರಿ ಸುತ್ತೋಲೆ ಸಂಖ್ಯೆ ಇಎನ್/41/ ವಿಎಸ್‌ಸಿ/2014 ದಿನಾಂಕ 14-07-2014 ರ ಸರ್ಕಾರದ ಆದೇಶದ ಪ್ರಕಾರ ಶೀಘ್ರ ಸಂಪರ್ಕ ಯೋಜನೆಯಡಿ ಸಂಪರ್ಕ ಕಲ್ಪಿಸಲು ಮೂಲಭೂತ ಸೌಕರ್ಯ ಶುಲ್ಕ ರೂ.10,000/- ಗಳ ಜೊತೆಗೆ ಠೇವಣಿ ಹಣವನ್ನು ಪಾವತಿಸಿದ ರೈತರು ಸ್ವಯಂ ನಿರ್ವಹಣಾ ಯೋಜನೆಯಡಿ ಮೂಲಭೂತ ಸೌಕರ್ಯವನ್ನು ಕಲ್ಪಿಸಿಕೊಂಡಲ್ಲಿ ಅಗತ್ಯವಿರುವಲ್ಲಿ ಲಭ್ಯತೆ ಮತ್ತು ಆದ್ಯತೆ ಮೇರೆಗೆ ಪರಿವರ್ತಕಗಳನ್ನು ಅಳವಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ. ಶೀಘ್ರ ಸಂಪರ್ಕ ಯೋಜನೆಯಡಿಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಿರುವ ಕಂಪನಿವಾರು ವಿವರಗಳನ್ನು **ಅನುಬಂಧದಲ್ಲಿ** ಒದಗಿಸಲಾಗಿದೆ. ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಶೀಘ್ರ ಸಂಪರ್ಕ ಯೋಜನೆಯಡಿಯಲ್ಲಿ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಲು ಅಧಿಕಾರಿಗಳು ವಿಳಂಬ ಧೋರಣೆ ಮಾಡುತ್ತಿರುವುದಿಲ್ಲ. ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಅವಶ್ಯಕತೆವಿರುವೆಡೆಯಲ್ಲಿ ಪರಿವರ್ತಕಗಳನ್ನು ಅಳವಡಿಸಲು ರೈತರಿಂದ ಯಾವುದೇ ಶುಲ್ಕವನ್ನು ವಿದ್ಯುತ್ ಸರಬರಾಜು ಕಂಪನಿಗಳು ತೆಗೆದುಕೊಳ್ಳುತ್ತಿರುವುದಿಲ್ಲ.
ಆ)	ಬಂದಿದ್ದಲ್ಲಿ, ರೈತರು ತತ್ಕಾಲ್ ಯೋಜನೆ ಅಡಿ ವಿದ್ಯುತ್ ಪರಿವರ್ತಕ ಪಡೆಯಲು ಹಣ ಕಟ್ಟಿದ್ದು, ಲಕ್ಷಾಂತರ ರೂಪಾಯಿ ಕಂಬ ಮತ್ತು ತಂತಿ ಅಳವಡಿಸಿಕೊಂಡು ವರ್ಷಗಳಿಂದ ಕಾಯುತ್ತಿದ್ದು, ವಿದ್ಯುತ್ ಪರಿವರ್ತಕಗಳನ್ನು ಈವರೆವಿಗೂ ವಿತರಿಸಿರುವುದಿಲ್ಲವಾದ್ದರಿಂದ ವಿದ್ಯುತ್ ಪರಿವರ್ತಕಗಳನ್ನು ಯಾವ ಕಾಲಮಿತಿಯಲ್ಲಿ ಅಳವಡಿಸಲಾಗುವುದು; ವಿದ್ಯುತ್ ಪರಿವರ್ತಕಗಳನ್ನು ಅಳವಡಿಸುವಲ್ಲಿ ವಿಳಂಬ ದೋರಣೆ ಅನುಸರಿಸುತ್ತಿರುವ ಅಧಿಕಾರಿಗಳ ವಿರುದ್ಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು;	
ಇ)	ಯಾವುದೇ ಯೋಜನೆಯ ವಿದ್ಯುತ್ ಪರಿವರ್ತಕಗಳು ಸುಟ್ಟು ಹೋದರೆ, ಬದಲಿಸಲು ಮತ್ತು ಅಳವಡಿಸಲು ಕೆಳಹಂತದ ಸಿಬ್ಬಂದಿಯಿಂದ ಶೋಷಣೆಯಾಗುತ್ತಿರುವ ಬಗ್ಗೆ ದೂರುಗಳು ಕೇಳಿ ಬಂದಿದ್ದು, ಗ್ರಾಮೀಣ ಪ್ರದೇಶದಲ್ಲಿ ತಂತಿ ಮಾರ್ಗ ಬದಲಿಸುವ ವಿಚಾರದಲ್ಲಿ ರೈತರಿಂದ ಸುಲಿಗೆಯಾಗುತ್ತಿದ್ದು, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; ಕೈಗೊಂಡಿದ್ದ ಇಂತಹ ಅಧಿಕಾರಿಗಳು/ಸಿಬ್ಬಂದಿಯ ವಿರುದ್ಧ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ?	ವಿಫಲವಾದ ವಿದ್ಯುತ್ ಪರಿವರ್ತಕಗಳನ್ನು ಬದಲಾಯಿಸಲು ಹಾಗೂ ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ಮಾರ್ಗಗಳನ್ನು ಬದಲಿಸುವ ಬಗ್ಗೆ ವಿದ್ಯುತ್ ಸರಬರಾಜು ಕಂಪನಿಗಳ ಸಿಬ್ಬಂದಿಯಿಂದ ಶೋಷಣೆಯಾಗುತ್ತಿರುವ ಬಗ್ಗೆ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ. ಅಂತಹ ಯಾವುದಾದರು ದೂರುಗಳು ಕಂಡು ಬಂದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಇಎನ್ 68 ಇಬಿಎಸ್ 2022

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತ ಸಚಿವರು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಹೆಚ್. ಎಂ. ರಮೇಶಗೌಡ ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ **1682**ಕ್ಕೆ ಅನುಬಂಧ:-

2014 ರಿಂದ ಫೆಬ್ರವರಿ 2022ರ ಅಂತ್ಯದವರೆಗೆ ಶೀಘ್ರ ಸಂಪರ್ಕ ಯೋಜನೆಯಡಿ ವಿದ್ಯುದೀಕರಣಗೊಂಡ, ವಿದ್ಯುದೀಕರಣಗೊಳಿಸಲು ಬಾಕಿ ಇರುವ ನೀರಾವರಿ ಪಂಪ್‌ಸೆಟ್‌ಗಳ ವಿವರಗಳು:

ವಿದ್ಯುತ್ ಸರಬರಾಜು ಕಂಪನಿ ಹೆಸರು	ಶೀಘ್ರ ಸಂಪರ್ಕ ಯೋಜನೆಯಡಿ ನೋಂದಣಿಗೊಂಡ ಅರ್ಜಿಗಳ ಸಂಖ್ಯೆ	ಮೂಲಭೂತ ಸೌಕರ್ಯ ಶುಲ್ಕ ರೂ.10000/- & ಇತರೆ ಠೇವಣಿಗಳನ್ನು ಪಾವತಿಸಿರುವ ಅರ್ಜಿಗಳ ಸಂಖ್ಯೆ	ಅರ್ಜಿದಾರರಿಂದ ಮೂಲಭೂತ ಸೌಕರ್ಯ ಕಲ್ಪಿಸಿಕೊಂಡ ಅರ್ಜಿಗಳ ಸಂಖ್ಯೆ	ವಿದ್ಯುತ್ ಸಂಪರ್ಕಗೊಂಡ ಅರ್ಜಿಗಳ ಸಂಖ್ಯೆ	ಅಳವಡಿಸಲಾದ ಪರಿವರ್ತಕಗಳ ಸಂಖ್ಯೆ	ಎಸ್ಕಾಂಗಳಿಂದ ಪರಿವರ್ತಕಗಳನ್ನು ಸರಬರಾಜು ಮಾಡಲು ಬಾಕಿ ಇರುವ ಅರ್ಜಿಗಳ ಸಂಖ್ಯೆ	ಅರ್ಜಿದಾರರಿಂದ ಮೂಲಭೂತ ಸೌಕರ್ಯ ಕಲ್ಪಿಸಲು ಬಾಕಿ ಇರುವ ಅರ್ಜಿಗಳ ಸಂಖ್ಯೆ
ಬೆಸ್ಕಾಂ	26085	26010	23829	22119	22119	1710	2181
ಮೆಸ್ಕಾಂ	6200	6065	6023	6007	3026	16	42
ಸೆಸ್ಕ್	9085	9085	9085	9029	5124	39	0
ಹೆಸ್ಕಾಂ	20365	19392	17941	16113	15918	1828	1451
ಜೆಸ್ಕಾಂ	2977	2486	1781	1781	629	0	705
ಒಟ್ಟು	**64712**	**63038**	**58659**	**55049**	**46816**	**3593**	**4379**